ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS** 5

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 07/09/2020

# ಅಧಿವೇಶನದಲ್ಲಿ ಮಾರ್ಪಾಡು

ಹುಬ್ಬಳ್ಳಿ: ಸಪ್ಟೆಂಬರ್ 14ರಿಂದ ಅಕ್ಟೋಬರ್ 1ರವರೆಗೆ ನಡೆಯಲಿರುವ ಸಂಸತ್ ಅಧಿವೇಶನದಲ್ಲಿ ಕೋವಿಡ್ ಕಾರಣಕ್ಕಾಗಿ ಹಲವು ಮಾರ್ಪಾಡು ಮಾಡಲಾಗಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.



ಮಾತನಾಡಿದ ಅವರು, ಸಂಸದರು, ಅತಿ ಮುಖ್ಯ ಅಧಿಕಾರಿಗಳಿಗೆ ಮಾತ್ರ ಸಂಸತ್‌ಗೆ ಅನುಮತಿ ಇದೆ. ಸಂಸದರ ಹಾಗೂ ಸಚಿವರ ಆಪ್ತ ಸಹಾಯಕರಿಗೆ ಅನುಮತಿಯಿಲ್ಲ. ಸಾಮಾಜಿಕ ಅಂತರ ಕಾಯ್ದುಕೊಳ್ಳಲು ರಾಜ್ಯಸಭೆ ಹಾಗೂ ಲೋಕಸಭೆ ಎರಡನ್ನೂ ಬಳಸಿಕೊಳ್ಳಲಾಗುವುದು ಎಂದರು.

ಇನ್ನು ಅಧಿವೇಶನಕ್ಕೆ ವಿಪಕ್ಷಗಳು ತಗಾದೆ ತೆಗೆದ ವಿಚಾರದ ಕುರಿತು ಪ್ರತಿಕ್ರಿಯಿಸಿದ ಅವರು, ಅಧಿವೇಶನ ನಡೆಸುವ ಕುರಿತು ವಿಪಕ್ಷನಾಯಕರುಗಳ ಜೊತೆ ಮಾತನಾಡಿದ್ದೇನೆ. ಅಧಿವೇಶನ ನಡೆಸಲು ಮೊದಲು ಒಪ್ಪಿ ಈಗ ವಿರೋಧಿಸುತ್ತಿದ್ದಾರೆ. ಪ್ರಶ್ನೋತ್ತರ ಕಲಾಪ ನಡೆಸಿದರೆ, ಹೆಚ್ಚಿನ ಅಧಿಕಾರಿಗಳು ಭಾಗವಹಿಸ ಬೇಕಾಗುತ್ತದೆ. ಕೇರಳ, ರಾಜಸ್ತಾನ, ಪಶ್ಚಿಮ ಬಂಗಾಳದಲ್ಲಿ ಅಧಿವೇಶನ ನಡೆಸಿ, ಚರ್ಚೆ ಇಲ್ಲದೇ ಮಸೂದೆಗಳನ್ನು (ಬಿಲ್) ಪಾಸ್ ಮಾಡಿದ್ದಾರೆ. ಕಾಂಗ್ರೆಸ್ ಹಾಗೂ ವಿರೋಧ ಪಕ್ಷಗಳು ಸಂಕಷ್ಟದ ಸ್ಥಿತಿಯಲ್ಲೂ ವಿರೋಧದ ಜೊತೆ ವಿಚಿತ್ರವಾಗಿ ವರ್ತಿಸುತ್ತಿವೆ. ಈ ಹಿಂದೆ ಕಾಂಗ್ರೆಸ್ ಸೇರಿ ಇತರೆ ಪಕ್ಷಗಳು ಕೇವಲ ಎರಡು ದಿನ ಅಧಿವೇಶನ ನಡೆಸಿದ ಉದಾಹರಣೆಗಳಿವೆ ಎಂದು ಜೋಶಿ ತಿರುಗೇಟು ನೀಡಿದರು.